ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ, ಶ್ರೀರಂಗಪಟ್ಟಣ.

ಕ್ರಿಮಿನಲ್ ಮೊಕದ್ದಮೆ ಸಂಖ್ಯೆ **: 31/2019**

**ಚಾ.ಸಾ. :-1**
**ಪ್ರಾ.ಸಾ. :-2**

| | |
|---|---|
| ಹೆಸರು | : ರವಿ ಕುಮಾರ್ |
| ತಂದೆಯ ಹೆಸರು | : ಲೇಟ್ ಕೃಷ್ಣಪ್ಪ |
| ವಯಸ್ಸು | : 41 ವರ್ಷ |
| ಉದ್ಯೋಗ | : ಕೂಲಿ |
| ವಾಸಸ್ಥಳ | : ಶ್ರೀರಂಗಪಟ್ಟಣ |

---

ಪ್ರಮಾಣೀಕರಿಸಲಾದ ದಿನಾಂಕಃ**- 07.07.2026**

ಮುಖ್ಯ ವಿಚಾರಣೆ **:** ಮಾನ್ಯ ಸ.ಸ.ಅ.ರವರಿಂದ **:**

ಮೃತ ಶಾರದರವರು ನನ್ನ ಅಕ್ಕ. ಚಾ.ಸಾ-2 ಮತ್ತು 3 ಪರಿಚಿತರು. ಚಾ.ಸಾ-4 ಮತ್ತು 5 ಸಹೋದರಿಯರು. ದಿನಾಂಕಃ 26.03.2019 ರಂದು ಮಧ್ಯಾಹ್ನ 1.45 ರ ಸಮಯದಲ್ಲಿ ಶ್ರೀರಂಗಪಟ್ಟಣದ ಬಸ್ ಸ್ಟಾಂಡ್ ಬಳಿ ನನ್ನ ಅಕ್ಕ ಶಾರದರವರಿಗೆ ಅಪಘಾತವಾಗಿರುತ್ತದೆ. ಆ ಸಮಯದಲ್ಲಿ ಅವರು ದ್ವಿಚಕ್ರ ವಾಹನದಲ್ಲಿ ಹೋಗುತ್ತಿದ್ದು, ಅವರಿಗೆ ಕ್ಯಾಂಟರ್ ವಾಹನ ಡಿಕ್ಕಿಪಡಿಸಿ ಅಪಘಾತವಾಗಿರುತ್ತದೆ.

ಅಪಘಾತವಾದ ಸಮಯದಲ್ಲಿ ನಾನು ಮನೆಯಲ್ಲಿದ್ದೆ. ಅಪಘಾತವನ್ನು ನಾನು ನೇರವಾಗಿ ನೋಡಿರುವುದಿಲ್ಲ. ಅಪಘಾತವು ಹೇಗೆ, ಯಾವ ರೀತಿ ಹಾಗೂ ಯಾರ ನಿರ್ಲಕ್ಷ್ಯತನದಿಂದ ಉಂಟಾಗಿರುತ್ತದೆ ಎಂದು ನಾನು ನೇರವಾಗಿ ನೋಡಿರುವುದಿಲ್ಲ. ನನಗೆ ಅಪಘಾತದ ಬಗ್ಗೆ ಚಾ.ಸಾ-3 ರವರು ನನಗೆ ದೂರವಾಣಿ ಕರೆ ಮಾಡಿ ತಿಳಿಸಿರುತ್ತಾರೆ.

ಅಪಘಾತವಾದ ನಂತರ ನಾನು ಶ್ರೀರಂಗಪಟ್ಟಣದ ಸರ್ಕಾರಿ ಆಸ್ಪತ್ರೆಗೆ ಹೋಗಿ ಅವರನ್ನು ನೋಡಿರುತ್ತೇನೆ. ಅವರಿಗೆ ಪ್ರಜ್ಞೆ ಇರಲಿಲ್ಲ. ಹೆಚ್ಚಿನ ಚಿಕಿತ್ಸೆಗೆ ಮೈಸೂರಿನ ಸೆಂಟ್ ಜೋಸೆಫ್ ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತೇವೆ.

ಆ ಬಗ್ಗೆ ನಾನು ಪೊಲೀಸರಿಗೆ ದೂರು ನೀಡಿರುತ್ತೇನೆ. ಸಾಕ್ಷಿಯ ಸಹಿ ಇರುವ ಒಂದು ದಾಖಲೆಯು ದೂರಾಗಿದ್ದು ಅದನ್ನು ಈಗ ನಿಪಿ-1 ಎಂದು ಮತ್ತು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರ್ತಿಸಲಾಯಿತು.

ನಂತರ ಚಿಕಿತ್ಸೆ ಫಲಕಾರಿಯಾಗದೇ ಸದರಿಯವರು ಸುಮಾರು 5 ದಿನಗಳ ನಂತರ ಮೃತಪಟ್ಟಿರುತ್ತಾರೆ. ಆ ಬಗ್ಗೆ ನಾನು ಪೊಲೀಸರಿಗೆ ಮತ್ತೊಮ್ಮೆ ದೂರು ನೀಡಿರುತ್ತೇನೆ. ಸಾಕ್ಷಿಯ ಸಹಿ ಇರುವ ಆ ದಾಖಲೆಯು ಮರು ದೂರಾಗಿದ್ದು ಅದನ್ನು ಈಗ ನಿಪಿ-2 ಎಂದು ಮತ್ತು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರ್ತಿಸಲಾಯಿತು.

ಚಾ.ಸಾ-3 ರವರು ದೂರವಾಣಿ ಕರೆ ಮಾಡಿ ಅಪಘಾತದ ಬಗ್ಗೆ ಮಾಹಿತಿ ನೀಡಿದ್ದು ಆರೋಪಿಯ ತಪ್ಪಿನಿಂದ ಅಪಘಾತವಾಗಿರುತ್ತದೆ ಎಂದು ತಿಳಿಸಿರುತ್ತಾರೆ. ಅವರು ನೀಡಿದ ಮಾಹಿತಿ ಆಧಾರದ ಮೇಲೆ ನಾನು ದೂರು ನೀಡಿರುತ್ತೇನೆ.

<u>ಪಾಟೀ ಸವಾಲು : ಆರೋಪಿ ಪರ ವಕೀಲರಿಂದ :</u>

ದೂರನ್ನು ಪೊಲೀಸರು ಬರೆದಿರುತ್ತಾರೆ, ನನಗೆ ಬರೆಯಲು ಬರುವುದಿಲ್ಲ. ಅಪಘಾತ ಹೇಗೆ ಆಗಿರುತ್ತದೆ ಎಂದು ನನಗೆ ಖುದ್ದಾಗಿ ಮಾಹಿತಿ ಇಲ್ಲ ಎಂದರೆ ಸರಿ. ಆರೋಪಿ ತಪ್ಪಿನಿಂದ ಅಪಘಾತವಾಗದೇ ಇದ್ದರೂ ಆತನ ವಿರುದ್ಧ ಸುಳ್ಳು ಪ್ರಕರಣವನ್ನು ದಾಖಲೆ ಮಾಡಿರುತ್ತೇವೆ ಎಂದರೆ ಸರಿಯಲ್ಲ. ಆರೋಪಿ ನಿರ್ಲಕ್ಷ್ಯತನದಿಂದ ಅಪಘಾತ ಆಗದಿದ್ದರೂ ಪರಿಹಾರದ ಸಲುವಾಗಿ ಸುಳ್ಳು ದೂರು ನೀಡಿ, ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದೂರನ್ನು ಬರೆಯಲು ನಾನು ಮಾಹಿತಿ ನೀಡಿರುತ್ತೇನೆ. ಅಪಘಾತಪಡಿಸಿದ ವಾಹನದ ನೋಂದಣಿ ಸಂಖ್ಯೆ ಗೊತ್ತಿಲ್ಲ.

<u>ಮರು ವಿಚಾರಣೆ :</u> ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

ಪ್ರಧಾನ ಹಿರಿಯ ಸಿಜೆ ಮತ್ತು
ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.

**ಸಾಕ್ಷಿದಾರರ ಸಹಿ.**